ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):

ಅ) ಇಲ್ಲ.

**ಪಟ್ ಭೂಮಿಯಲ್ಲಿ ಗ್ರಾನೈಟ್ ತೆಗೆಯುವ ನಿಷೇಧಕ್ಕೆ ಕಾನೂನು.**

399 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ.

*ಅ) ಪಟ್ಟಾ ಭೂಮಿಯಲ್ಲಿ ಗ್ರಾನೈಟ್ ತೆಗೆಯುವುದನ್ನು ನಿಷೇಧಿಸುವ ಕಾನೂನನ್ನು ಸರ್ಕಾರವು ತರಬಾರದೇಕೆ?*

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

ಅ) ಪಟ್ಟಾ ಭೂಮಿಯಲ್ಲಿ ಗ್ರಾನೈಟ್ ಮತ್ತಿತರ ಬೆಲೆಬಾಳುವ ಗಣಿ ಸಂಪತ್ತು ತೆಗೆಯುವುದನ್ನು ನಿಷೇಧಿಸುವ ಸಲುವಾಗಿ ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 70ಕ್ಕೆ ಸೂಕ್ತ ತಿದ್ದುಪಡಿಯನ್ನು ತರಲು ಸರ್ಕಾರ ಈಗಾಗಲೇ ಕ್ರಮ ತೆಗೆದುಕೊಂಡಿರುತ್ತದೆ. ತಿದ್ದುಪಡಿ ಬಿಲ್‌ನ್ನು ಸಧ್ಯದಲ್ಲಿಯೇ ಶಾಸಕಾಂಗದ ಮುಂದೆ ಮಂಡಿಸಲು ಉದ್ದೇಶಿಸಲಾಗಿದೆ.

**ಭೂ ನ್ಯಾಯ ಮಂಡಲಿಗಳಲ್ಲಿ ಇತ್ಯರ್ಥವಾಗಬೇಕಾಗಿರುವ ಮೊಕದ್ದಮೆಗಳು.**

400 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ.

*ರಾಜ್ಯದ ವಿವಿಧ ಭೂ ನ್ಯಾಯ ಮಂಡಳಿಗಳಲ್ಲಿ ಇನ್ನೂ ಇತ್ಯರ್ಥವಾಗ ಬೇಕಾಗಿರುವ ಮೊಕದ್ದಮೆಗಳ ಸಂಖ್ಯೆ ಎಷ್ಟು?*

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

34607 ಮೊಕದ್ದಮೆಗಳು.

**ರಸಗೊಬ್ಬರವನ್ನು ಕಡಿಮೆ ದರದಲ್ಲಿ ಹಂಚಲು ಸರ್ಕಾರದ ನಿರ್ಧಾರ.**

401 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ.

*ಅ) ರಸಗೊಬ್ಬರಗಳನ್ನು ಕಡಿಮೆ ದರದಲ್ಲಿ ರೈತರಿಗೆ ಹಂಚಲು ಸರ್ಕಾರವು ಸಬ್ಸಿಡಿ ನೀಡಲು ತೀರ್ಮಾನಿಸಿದೆಯೇ?*

ಶ್ರೀ ಎನ್. ಚಿಕ್ಕಗೌಡ (ಕೃಷಿ ಸಚಿವರು):

ಅ) ಹೌದು.

ರಂಜಕ, ಪೊಟ್ಯಾಷ್ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರಗಳನ್ನು ಅನಿಯಂತ್ರಣಗೊಳಿಸಿದ ಮೇಲೆ ಉದ್ಭವಿಸಿರುವ ರಸಗೊಬ್ಬರಗಳ ಬೆಲೆ ಏರಿಕೆಯ ಹೊರೆಯನ್ನು ಕಡಿಮೆ ಮಾಡಲು ಕೇಂದ್ರ ಸರ್ಕಾರ ನೀಡಿರುವ 17.53 ಕೋಟಿ ರೂಪಾಯಿಗಳನ್ನು ಬಳಸಿಕೊಂಡು 2,39,900 ಟನ್ ರಸಗೊಬ್ಬರಗಳನ್ನು ಸಬ್ಸಿಡಿ ದರದಲ್ಲಿ ರೈತರಿಗೆ ಹಂಚುವ ಯೋಜನೆಯನ್ನು ಈ ಹಿಂಗಾರಿನಲ್ಲಿ ಜಾರಿಗೊಳಿಸಲಾಗಿದೆ.

ಇದಲ್ಲದೆ ಕೇಂದ್ರ ಸರ್ಕಾರವು ರೂಪಿಸಿರುವ ವಿಶೇಷ ಯೋಜನೆಯಡಿಯಲ್ಲಿ 1993ನೇ ಸಾಲಿನಲ್ಲಿ (ಜನವರಿಯಿಂದ-ಡಿಸೆಂಬರ್‌ವರೆವಿಗೂ) ರಂಜಕ, ಪೊಟಾಸ್ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರಗಳ 36.66 ಲಕ್ಷ ಟೀಲಗಳನ್ನು, ಪ್ರತಿ ಟೀಲಕ್ಕೆ